# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20ನೇ ಸಾಲಿನ ಸಾಮಾನ್ಯ ಯೋಜನೆಯಡಿ ಬಿಡುಗಡೆಯಾದ ಗದಗ ನಗರದ ವರ್ಲ್ಡ್ ರಿನ್ಯೂವಲ್ ಸ್ಪಿರಿಚುವಲ್ ಟ್ರಸ್ಟ್ ವತಿಯಿಂದ ಸಾಂಸ್ಕೃತಿಕ ಭವನ ನಿರ್ಮಾಣ ಕಾಮಗಾರಿಗೆ 2ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ ಕಸಂವಾ 302 ಕಸಧ 2019, ದಿನಾಂಕ 19-12-2019.
2. ಸರ್ಕಾರದ ಆದೇಶ ಸಂಖ್ಯೆ:ಕಸಂವಾ 65 ಕಸಧ 2021, ದಿನಾಂಕ:26.03.2021
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ: ಡಿಕೆಸಿ/25027/32/ 2019, ದಿನಾಂಕ: 15.09.2021.

****

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಗದಗ ನಗರದ ವರ್ಲ್ಡ್ ರಿನ್ಯೂವಲ್ ಸ್ಪಿರಿಚುವಲ್ ಟ್ರಸ್ಟ್ ವತಿಯಿಂದ ನಿರ್ಮಿಸಲಾಗುತ್ತಿರುವ ಸಾಂಸ್ಕೃತಿಕ ಭವನ ನಿರ್ಮಾಣ ಕಾಮಗಾರಿಗೆ ರೂ.10.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2) ಸರ್ಕಾರದ ಆದೇಶದಲ್ಲಿ, ಗದಗ ನಗರದ ವರ್ಲ್ಡ್ ರಿನ್ಯೂವಲ್ ಸ್ಪಿರಿಚುವಲ್ ಟ್ರಸ್ಟ್ ವತಿಯಿಂದ ನಿರ್ಮಿಸಲಾಗುತ್ತಿರುವ ಸಾಂಸ್ಕೃತಿಕ ಭವನ ನಿರ್ಮಾಣ ಕಾಮಗಾರಿಗೆ ಎರಡನೇ ಕಂತಿನ ರೂ.10.00 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳು ಗದಗ್ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ(3)ರ ಪತ್ರದಲ್ಲಿ, ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಮಂಜೂರಾತಿ ನೀಡಿರುವ ಲೆಕ್ಕಶೀರ್ಷಿಕೆಯಡಿ 2020-21ನೇ ಸಾಲಿನಲ್ಲಿ ಕ್ರಿಯಾಯೋಜನೆಯಲ್ಲಿ ಅವಕಾಶ ಮಾಡಿಕೊಳ್ಳದೇ ಇರುವ 03 ಸಂಸ್ಥೆಗಳಿಗೆ ರೂ.8.10 ಕೋಟಿ ಹಾಗೂ ಕೋವಿಡ್-19ರ ಸಮಯದಲ್ಲಿ ಆರ್ಥಿಕ ಸಂಕಷ್ಟದಲ್ಲಿರುವ ಕಲಾವಿದರಿಗೆ ಆರ್ಥಿಕ ಸಹಾಯ ನೀಡಲು ರೂ.3.40 ಕೋಟಿ ಒಟ್ಟು ರೂ.11.50ಕೋಟಿಗಳು ವೆಚ್ಚವಾಗಿದ್ದು, ಸದರಿ ವೆಚ್ಚವನ್ನು ಆರ್ಥಿಕ ಇಲಾಖೆಯು ಹೆಚ್ಚುವರಿಯಾಗಿ ನೀಡುವುದಾಗಿ ತಿಳಿಸಿದ್ದು, ಲೆಕ್ಕ ಶೀರ್ಷಿಕೆ:2205-00-102-4-31-059ರಡಿ ರೂ.10.00ಕೋಟಿಗಳ ಅನುದಾನವನ್ನು ಹಿಂಪಡೆಯಲಾಗಿದೆ. ಆದ್ದರಿಂದ ಸದರಿ ಅನುದಾವನ್ನು ಗಣಕೀಕರಣ ಮಾಡಲು ಸಾಧ್ಯವಾಗಿರುವುದಿಲ್ಲ.

ಈ ಅಂಶಗಳ ಹಿನ್ನೆಲೆಯಲ್ಲಿ ಗದಗ ನಗರದ ವರ್ಲ್ಡ್ ರಿನ್ಯೂವಲ್ ಸ್ಪಿರಿಚುವಲ್ ಟ್ರಸ್ಟ್ ವತಿಯಿಂದ ಸಾಂಸ್ಕೃತಿಕ ಭವನ ನಿರ್ಮಾಣ ಕಾಮಗಾರಿಗೆ ಎರಡನೇ ಕಂತಿನ ಅನುದಾನ ರೂ.10.00ಲಕ್ಷಗಳನ್ನು ನವೀಕರಿಸಿ 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ:2205-00-102-4-01-100ರಡಿ ಅವಕಾಶ ಮಾಡಿಕೊಂಡಿರುವ ರೂ.300.00 ಲಕ್ಷಗಳಲ್ಲಿ ರೂ.10.00 ಲಕ್ಷಗಳನ್ನು ಭರಿಸಿ, ಜಿಲ್ಲಾಧಿಕಾರಿಗಳು ಗದಗ್ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 208 ಕಸಧ 2021, ಬೆಂಗಳೂರು, ದಿನಾಂಕ: 27-09-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಕಸಂವಾ 65 ಕಸಧ 2021, ದಿನಾಂಕ:26.03.2021ರನ್ವಯ ರೂ.10.00 ಲಕ್ಷಗಳ ಅನುದಾನವನ್ನು ಲೆಕ್ಕಶೀರ್ಷಿಕೆ:2205-00-102-4-31-059ರಡಿ ಬಿಡುಗಡೆ ಮಾಡಿರುವ ಆದೇಶವನ್ನು ನವೀಕರಿಸಿ, 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ:2205-00-102-4-01-100ರಡಿ ರೂ.10.00ಲಕ್ಷ (ರೂಪಾಯಿ ಹತ್ತು ಲಕ್ಷಗಳು ಮಾತ್ರ)ಗಳನ್ನು, ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ ಜಿಲ್ಲಾಧಿಕಾರಿಗಳು ಗದಗ್ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲು, ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

.....2

:ಷರತ್ತುಗಳು:

1)ಸದರಿ ಆದೇಶವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು;

2)ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ನಿಯಮಗಳು 2000 ಅನ್ನು ಕಡ್ಡಾಯವಾಗಿ ಪಾಲಿಸುವುದು

3)ಸದರಿ ಕಾಮಗಾರಿಯು ಸಮರ್ಪಕವಾಗಿ ನಿರ್ವಹಿಸಿರುವ ಹಾಗೂ ಆಡಳಿತಾತ್ಮಕ ಅನುಮೋದನೆ ನೀಡುವ ಸಂದರ್ಭದಲ್ಲಿ ವಿಧಿಸಲಾದ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು;

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ: 05.04.2021ರನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ವೆಂಕಟೇಶಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಸಂಸ್ಕೃತಿ).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ) ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ಜಿಲ್ಲಾಧಿಕಾರಿಗಳು,ಗದಗ ಜಿಲ್ಲೆ, ಗದಗ
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ಕೆ.ಪಿ.ಸಿ.ಎಲ್. ಕಟ್ಟಡ, 6ನೇ ಮಹಡಿ, ಔಷಧಿ ನಿಯಂತ್ರಣ ಕಚೇರಿ, ಪ್ಯಾಲೇಸ್ ರಸ್ತೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-7, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.